ಕರ್ನಾಟಕ ಸರ್ಕಾರ

**ಆಯುಕ್ತರ ಕಛೇರಿ, ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು-01**

ಸಂಖ್ಯೆ:-ಇ-ಆಡಳಿತ/ಶಿಕ್ಷಕ ಮಿತ್ರ/2020-21 ದಿನಾಂಕ:-09-09-2022

**-:ಸುತ್ತೋಲೆ:-**

**ವಿಷಯ:**- ಶಿಕ್ಷಕರ ಸೇವಾ ಸೌಲಭ್ಯಗಳನ್ನು ಶಿಕ್ಷಕ ಮಿತ್ರ ತಂತ್ರಾಂಶದ ಮೂಲಕ ಕಡ್ಡಾಯವಾಗಿ ಅನುಷ್ಠಾನಗೊಳಿಸುವ ಬಗ್ಗೆ.

**ಉಲ್ಲೇಖ:**-01 ಸರ್ಕಾರದ ಸುತ್ತೋಲೆ ಸಂಖ್ಯೆ ಇ ಡಿ 06 ಡಿ ಎ ಆರ್ 2019 ಬೆಂಗಳೂರು 01 ದಿನಾಂಕ:-15/06/2019

02 ಈ ಕಛೇರಿಯ ಅಧಿಕೃತ ಜ್ಞಾಪನ ಸಂಖ್ಯೆ ಸಿ 1(1) ನೌ ಸೇ ಆನ್ ಲೈನ್ 01/2020-21 ದಿನಾಂಕ:-10/09/2020

03 ಈ ಕಛೇರಿಯ ಅಧಿಕೃತ ಜ್ಞಾಪನ ಸಂಖ್ಯೆ ಸಿ 1(6) (8) ಆಸ್ತಿ ಮಖರೀದಿ ಅನು 45/2018-2019 ದಿನಾಂಕ:- 03/04/2019

********

ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಇಲಾಖೆಯು ರಾಜ್ಯ ಸರ್ಕಾರದ ಮಹತ್ವದ ಹಾಗೂ ವಿಸ್ತಾರವಾದ ಇಲಾಖೆಗಳಲ್ಲಿ ಒಂದಾಗಿದ್ದು ಹೆಚ್ಚು ಮಾನವ ಸಂಪನ್ಮೂಲವನ್ನು ಹೊಂದಿರುವ ಇಲಾಖೆಯಾಗಿದೆ. ಸುಮಾರು 2.60 ಲಕ್ಷ ಸಿಬ್ಬಂದಿ ಇಲಾಖೆಯಲ್ಲಿ ಕಾರ್ಯ ನಿರ್ವಹಿಸುತ್ತಿದ್ದು ಅವರೆಲ್ಲರಿಗೂ ನಿಯಮಾನುಸಾರ ಅಗತ್ಯ ಸೇವೆಗಳನ್ನು ಒದಗಿಸುವುದು ಇಲಾಖೆಯ ಆಡಳಿತಾತ್ಮಕ ಕರ್ತವ್ಯವಾಗಿದೆ.

ಈ ಹಿನ್ನೆಲೆಯಲ್ಲಿ ಶಿಕ್ಷಕರು ಮತ್ತು ಸಿಬ್ಬಂದಿ ತಮಗೆ ಲಭ್ಯವಿರುವ ಸೌಲಭ್ಯಗಳನ್ನು ಪಡೆಯಲು ತರಗತಿ ಕೋಣೆಗಳಿಂದ ಹೊರಗುಳಿದು ಕಛೇರಿಗಳಿಗೆ ಅಲೆದಾಡುವುದನ್ನು ತಪ್ಪಿಸಿ ತನ್ಮೂಲಕ ತರಗತಿಯಲ್ಲಿ ಬೋಧನಾ ಚಟುವಟಿಕೆಗಳಲ್ಲಿ ನಿರಂತರವಾಗಿ ಪಾಲ್ಗೊಂಡು ಶಿಕ್ಷಣದ ಗುಣಮಟ್ಟವನ್ನು ಹೆಚ್ಚಿಸುವ ಉದ್ದೇಶದಿಂದ ಕ್ರಿ.ಶ 2020-2021ನೇ ಸಾಲಿನ ಆಯ-ವ್ಯಯದ ಘೋಷಣೆಯಂತೆ ಶಿಕ್ಷಕ ಮಿತ್ರ ತಂತ್ರಾಂಶವನ್ನು ರೂಪಿಸಿ 28/08/2020 ರಿಂದ ಜಾರಿಗೆ ಬರುವಂತೆ ಈ ಕೆಳಕಂಡ ಸೇವೆಗಳನ್ನು ಆನ್ ಲೈನ್ ಗೆ ಒಳಪಡಿಸಲಾಗಿದ್ದು ದೇಶದಲ್ಲಿಯೇ ಇದು ಮಹತ್ವದ ಕ್ರಮವಾಗಿರುತ್ತದೆ.

ಸರ್ಕಾರದ ಈ ಕ್ರಮ ನಿಷ್ಪಕ್ಷಪಾತ ಹಾಗೂ ಪಾರದರ್ಶಕತೆಯಿಂದ ಕೂಡಿದ್ದು ಶಿಕ್ಷಕರ/ಸಿಬ್ಬಂದಿಯವರ ಪ್ರಸ್ತಾವನೆಗಳ ತ್ವರಿತ ಇತ್ಯರ್ಥಕ್ಕೆ ಅನುಕೂಲವಾಗಲಿದೆ. ಹಾಗೂ ಶಿಕ್ಷಕರ ಮತ್ತು ಸಿಬ್ಬಂದಿಯವರ ಕಾರ್ಯದಕ್ಷತೆ ,ಕಾರ್ಯತತ್ಪರತೆಯನ್ನು ಇಮ್ಮಡಿಗೊಳಿಸುವ ಕ್ರಮವಾಗಿರುತ್ತದೆ.

ಆದ್ದರಿಂದ ಸರ್ಕಾರದ ಮಹತ್ವಾಕಾಂಕ್ಷಿ ಯೋಜನೆಯಾದ ಶಿಕ್ಷಕ ಮಿತ್ರ ಆನ್ ಲೈನ್ ಸೇವೆಗಳನ್ನು ಪರಿಣಾಮಕಾರಿಯಾಗಿ ಆನ್‌ಲೈನ್ ಮುಖಾಂತರವೇ ಅನುಷ್ಠಾನಗೊಳಿಸಬೇಕಾಗಿರುವುದು ಎಲ್ಲಾ ಬಟವಾಡೆ ಅಧಿಕಾರಿಗಳ ಆದ್ಯ ಕರ್ತವ್ಯವಾಗಿರುತ್ತದೆ. ಈ ಬಗ್ಗೆ ಈಗಾಗಲೇ ಉಲ್ಲೇಖಿತ ಪತ್ರಗಳಲ್ಲಿ ಕಟ್ಟುನಿಟ್ಟಾಗಿ ಅನುಪಾಲನೆ ಮಾಡಲು ಸೂಚಿಸಲಾಗಿರುತ್ತದೆ.

ಮೇಲ್ಕಂಡ ಅಂಶಗಳ ಹಿನ್ನೆಲೆಯಲ್ಲಿ ಎಲ್ಲಾ ಬಟವಾಡೆ ಅಧಿಕಾರಿಗಳು ಈ ಬಗ್ಗೆ ಕ್ರಮ ವಹಿಸಿ ತಮ್ಮ ಕಛೇರಿ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ಎಲ್ಲಾ ಶಿಕ್ಷಕರು ಮತ್ತು ಸಿಬ್ಬಂದಿ ವರ್ಗದವರಿಗೆ ಮನವರಿಕೆ ಮಾಡಿ ಪ್ರತಿಯೊಬ್ಬರು ಶಿಕ್ಷಕ ಮಿತ್ರ ತಂತ್ರಾಂಶದಲ್ಲಿ **USER ID** ಮತ್ತು **PASSWORD** ಗಳನ್ನು ಹೊಂದುವಂತೆ ಹಾಗೂ ತನ್ಮೂಲಕ ತಾವು ಬಯಸುವ ಈ ಕೆಳಕಂಡ ಸವಲತ್ತುಗಳನ್ನು ಇಲಾಖೆಯಿಂದ

ಪಡೆಯಲು ಇಚ್ಛಿಸಿದ್ದಲ್ಲಿ ಆನ್ ಲೈನ್ ಮುಖಾಂತರವೇ ಪ್ರಸ್ತಾವನೆ ಸಲ್ಲಿಸುವಂತೆ ಕ್ರಮವಹಿಸಲು ತಿಳಿಸಿದೆ. ಹಾಗೂ ಸದರಿ ಪ್ರಸ್ತಾವನೆಗಳನ್ನು ಶಿಫಾರಸ್ಸು ಮಾಡುವ ಪ್ರಾಧಿಕಾರ ಅಥವಾ ಮಂಜೂರಾತಿ ಪ್ರಾಧಿಕಾರ ಆನ್ ಲೈನ್ ಮುಖಾಂತರವೇ ಇತ್ಯರ್ಥಪಡಿಸಲು ಕಟ್ಟುನಿಟ್ಟಾಗಿ ಸೂಚಿಸಿದೆ.
ಮುಂದುವರೆದು ದಿ:-15/09/2022 ರ ನಂತರ ಈ ಕೆಳಕಂಡ ಸೌಲಭ್ಯಗಳನ್ನು ಪಡೆಯಲಿಚ್ಛಿಸುವ ಫಲಾನುಭವಿಗಳು ಭೌತಿಕ ಪ್ರಸ್ತಾವನೆಗಳನ್ನು ಸಲ್ಲಿಸುವ ಕ್ರಮವನ್ನು ರದ್ದುಪಡಿಸಲಾಗಿದೆ.
ಹಾಗೂ ಸಂಬಂಧಿಸಿದ ಕಛೇರಿ ಮುಖ್ಯಸ್ಥರು/ಬಟವಾಡೆಅಧಿಕಾರಿಗಳು ಈ ಕೆಳಕಾಣಿಸಿದ ಸೇವೆಗಳನ್ನು ಮಂಜೂರು ಮಾಡಲು ತಮ್ಮ ಕಛೇರಿಗಳಲ್ಲಿ ಯಾವುದೇ ಕಾರಣಕ್ಕೂ ಭೌತಿಕ ಪ್ರಸ್ತಾವನೆಗಳನ್ನು ಸ್ವೀಕರಿಸಬಾರದಾಗಿ ಕಟ್ಟುನಿಟ್ಟಾಗಿ ಸೂಚಿಸಲಾಗಿದೆ.
ಒಂದು ವೇಳೆ ಈ ಸಂಬಂಧ ದೂರುಗಳು ದಾಖಲಾದಲ್ಲಿ ಸಂಬಂಧಿಸಿದ ಅಧಿಕಾರಿಗಳ ವಿರುದ್ಧ ಶಿಸ್ತುಕ್ರಮ ಜರುಗಿಸಲಾಗುವುದು.

**ಇಲಾಖೆಯಿಂದ ಆನ್‌ಲೈನ್ ಗೆ ಒಳಪಡಿಸಲಾಗಿರುವ ಸೇವೆಗಳು ಈ ಕೆಳಕಂಡಂತಿವೆ.**

1) ರಜಾ ಮಂಜೂರಾತಿ
2) ನಿಯಮ-32 ಮತ್ತು ನಿಯಮ-68ರ ಅಡಿಯಲ್ಲಿ ಪ್ರಭಾರ ಭತ್ಯೆ.
3) ನಿವೇಶನ ಖರೀದಿ /ಕಟ್ಟಡ ನಿರ್ಮಾಣ, ವಾಹನಗಳ/ಇತರೆ ವಸ್ತುಗಳ ಖರೀದಿಗೆ ಇಲಾಖಾ ಅನುಮತಿ
4) ಹೊಸ ಪಾಸ್ ಪೋರ್ಟ್/ ಪಾಸ್ ಪೋರ್ಟ್ ನವೀಕರಣಕ್ಕೆ ನಿರಾಕ್ಷೇಪಣಾ ಪತ್ರ ನೀಡುವಿಕೆ.
5) ವೈಯಕ್ತಿಕ ವಿದೇಶ ಪ್ರವಾಸ ಕೈಗೊಳ್ಳಲು ನಿರಾಕ್ಷೇಪಣಾ ಪತ್ರ ನೀಡುವಿಕೆ.
6) ಹೆಚ್ಚುವರಿ ಅರ್ಹತಾದಾಯಕ ಸೇವೆ ಸೇರ್ಪಡೆ.
7) ಉನ್ನತ ವಿದ್ಯಾಭ್ಯಾಸಕ್ಕಾಗಿ ಅನುಮತಿ ನೀಡುವಿಕೆ.
8) ಎಲ್.ಟಿ.ಸಿ/ಹೆಚ್.ಟಿ.ಸಿ ಗಳ ಸೌಲಭ್ಯಗಳ ಮಂಜೂರಾತಿ
9) ಜಿ.ಪಿ.ಎಫ್ ಮುಂಗಡ/ಭಾಗಶಃ ವಾಪಸಾತಿ.
10) ಹಬ್ಬದ ಮುಂಗಡ ಮಂಜೂರಾತಿ.
11) ಸಣ್ಣ ಕುಂಟುಂಬ ಯೋಜನೆಯಡಿ ವಿಶೇಷ ಭತ್ಯೆ ಮಂಜೂರಾತಿ
12) ಅಂಗವಿಕಲರ ಭತ್ಯೆ ಮಂಜೂರಾತಿ
13) ಅಧಿಕಾರಿಗಳ ತಾತ್ಕಾಲಿಕ ಪ್ರವಾಸ ಪಟ್ಟಿ ಮತ್ತು ಪ್ರವಾಸ ದಿನಚರಿ ಅನುಮೋದನೆ.
14) ಪ್ರಥಮ ವೇತನ ಪ್ರಮಾಣ ಪತ್ರ.
15) ಉನ್ನತ ಹುದ್ದೆಗಳಿಗೆ ಅರ್ಜಿ ಸಲ್ಲಿಸಲು ಇಲಾಖಾ ಅನುಮತಿ ಪತ್ರ.
16) 10/15/20/25 ವರ್ಷಗಳ ಕಾಲಮಿತಿ/ಸ್ವಯಂ ಚಾಲಿತ ವೇತನ ಬಡ್ತಿ/ವಿಶೇಷ ವೇತನ ಬಡ್ತಿ ಮಂಜೂರಾತಿ
17) ಖಾಯಂ ಪೂರ್ವ ಅವಧಿ ಘೋಷಣೆ ಪ್ರಸ್ತಾವನೆ.

09/09/2022

ಡಾ.ವಿಶಾಲ್.ಆರ್., **ಭಾ.ಆ.ಸೇ.,**
ಆಯುಕ್ತರು

**ಇವರಿಗೆ,**

1. ರಾಜ್ಯದ ಎಲ್ಲಾ ವಿಭಾಗೀಯ ಜಂಟಿ ನಿರ್ದೇಶಕರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ
2. ರಾಜ್ಯದ ಎಲ್ಲಾ ಉಪನಿರ್ದೇಶಕರು (ಆಡಳಿತ) ರವರ ಮುಂದಿನ ಅಗತ್ಯ ಕ್ರಮಕ್ಕಾಗಿ
3. ರಾಜ್ಯದ ಎಲ್ಲಾ ಉಪನಿರ್ದೇಶಕರು (ಅಭಿವೃದಿ)) ರವರ ಮುಂದಿನ ಅಗತ್ಯ ಕ್ರಮಕ್ಕಾಗಿ
4. ರಾಜ್ಯದ ಎಲ್ಲಾ ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ತುರ್ತು ಅಗತ್ಯ ಕ್ರಮಕ್ಕಾಗಿ.
5. ರಾಜ್ಯದ ಎಲ್ಲಾ ಸರ್ಕಾರಿ ಪ್ರೌಢಶಾಲಾ ಮುಖ್ಯಶಿಕ್ಷಕರಿಗೆ ಮುಂದಿನ ಅಗತ್ಯ ಕ್ರಮಕ್ಕಾಗಿ(ಕ್ಷೇತ್ರ ಶಿಕ್ಷಣಾಧಿಕಾರಿಗಳ ಮುಖೇನ)
6. ಕಛೇರಿ ಪ್ರತಿ.

ಪ್ರತಿಯನ್ನು

1) ರಾಜ್ಯ ಯೋಜನಾ ನಿರ್ದೇಶಕರು, ಸಮಗ್ರ ಶಿಕ್ಷಣ ಕರ್ನಾಟಕ, ಬೆಂಗಳೂರು ಇವರಿಗೆ ಮಾಹಿತಿಗಾಗಿ
2) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಗುಲ್ಬರ್ಗಾ ರವರಿಗೆ ಮಾಹಿತಿಗಾಗಿ
3) ಅಪರ ಆಯುಕ್ತರು, ಸಾರ್ವಜನಿಕ ಶಿಕ್ಷಣ ಇಲಾಖೆ, ಧಾರವಾಡ ರವರಿಗೆ ಮಾಹಿತಿಗಾಗಿ
4) ರಾಜ್ಯದ ಎಲ್ಲಾ ನಿರ್ದೇಶಕರುಗಳ ಮಾಹಿತಿಗಾಗಿ ಹಾಗೂ ಸೂಕ್ತ ಕ್ರಮಕ್ಕಾಗಿ